ಈ) ರಾಜ್ಯ ಸರ್ಕಾರದ ಯೋಜನೆಗಳಲ್ಲಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ಸಾಧಿಸಿರುವ ಪ್ರಗತಿಯನ್ನು ಪ್ರತಿ ವಾರ ನಿಗಮದ ವೆಬ್‌ಸೈಟಿನಲ್ಲಿ ನಮೂದಿಸಲು ಅವಕಾಶ ನೀಡಲಾಗಿದ್ದು, ಈ ವರದಿಗೆ ಅನುಗುಣವಾಗಿ ಇಂಟರ್‌ನೆಟ್ ಬ್ಯಾಂಕಿಂಗ್ ಮೂಲಕ ನೇರವಾಗಿ ಗ್ರಾಮ ಪಂಚಾಯತಿಗಳಿಗೆ ಪ್ರತಿವಾರ ಅನುದಾನ ಬಿಡುಗಡೆ ಮಾಡಲಾಗುತ್ತಿದೆ

ಉ) ಉದ್ಭವಿಸುವುದಿಲ್ಲ

ಊ) ಕೇಂದ್ರ ಪುರಸ್ಕೃತ ಇಂದಿರಾ ಆವಾಸ್ ಯೋಜನೆಯಡಿ ಆರ್ಥಿಕ ವರ್ಷದಲ್ಲಿ ನಿಯಮಾನುಸಾರ ಶೇ 90ಕ್ಕಿಂತ ಕಡಿಮೆ ಸಾಧಿಸಿದಲ್ಲಿ ಅನುದಾನ ಬಿಡುಗಡೆಯಲ್ಲಿ ಕಡಿತಗೊಳಿಸಲಾಗುವುದು

1626 (2110) ಶ್ರೀ ಸಂಗಮೇಶ್ವರ ಬಿ ಕೆ (ಭದ್ರಾವತಿ) – ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭದ್ರಾವತಿ ತಾಲ್ಲೂಕಿನ ಭದ್ರಾ ಡ್ಯಾಂನ ಆವರಣದಲ್ಲಿ ಬೃಂದಾವನ ಪಾರ್ಕ್ ನಿರ್ಮಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರೂ ಸಹ ಇನ್ನೂವರೆಗೂ ಪಾರ್ಕ್ ನಿರ್ಮಿಸದಿರಲು ಕಾರಣಗಳೇನು,

ಆ) ಈ ಬಗ್ಗೆ ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಕೆ ಎಸ್ ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)

ಅ) ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ

ಆ) ಪರಿಶೀಲನೆಯಾದ ನಂತರ ನಿರ್ಧರಿಸಲಾಗುವುದು

1631 (2298) ಶ್ರೀ ಶಿವಾನಂದ ಎಸ್ ಪಾಟೀಲ್ (ಬಸವನಬಾಗೇವಾಡಿ) – ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪೂರ ಜಿಲ್ಲೆಯಲ್ಲಿ ಡೋಣಿ ನದಿ ಹರಿದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದಲ್ಲಿ, ಡೋಣಿ ನದಿಯಲ್ಲಿ ವ್ಯರ್ಥವಾಗಿ ಹರಿದು ಹೋಗುವ ನೀರನ್ನು ಸಂಗ್ರಹಿಸಿಡಲು ಯಾವ ಯೋಜನೆಯನ್ನು ರೂಪಿಸಲಾಗಿದೆ,

ಇ) ಡೋಣಿ ನದಿಯಲ್ಲಿ ವ್ಯರ್ಥವಾಗಿ ಹರಿದು ಹೋಗುವ ನೀರನ್ನು ಸಂಗ್ರಹಿಸುವಂತೆ ಇರುವ ಪ್ರಸ್ತಾವನೆ ಏನು,

ಈ) ಯಾವ ಕಾಲ ಮಿತಿಯೊಳಗೆ ಪ್ರಸ್ತಾಪಿತ ಯೋಜನೆಗೆ ಮಂಜೂರಾತಿ ನೀಡಲಾಗುವುದು?

ಶ್ರೀ ಕೆ ಎಸ್ ಈಶ್ವರಪ್ಪ (ಜಲ ಸಂಪನ್ಮೂಲ ಸಚಿವರು)

ಅ) ಬಂದಿದೆ

ಆ,ಇ,ಈ) ಡೋಣಿ ನದಿಯಲ್ಲಿ ನಾಲ್ಕು ಬಾಂದಾರಗಳನ್ನು ನಿರ್ಮಿಸುವ ಯೋಜನೆಯ ಕುರಿತು ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತದಲ್ಲಿ ಸರ್ವೆ ಕಾರ್ಯ ಪ್ರಗತಿಯಲ್ಲಿರುತ್ತದೆ

1632 (2299) ಶ್ರೀ ಶಿವಾನಂದ ಎಸ್ ಪಾಟೀಲ್ (ಬಸವನಬಾಗೇವಾಡಿ) – ಮಾನ್ಯ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಹಾಗೂ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಬ್ಬು ಬೆಳೆಯಲಾಗಿರುವ ಕ್ಷೇತ್ರವಾರು ಸಂಖ್ಯೆ ಎಷ್ಟು,

ಆ) ವಿಜಾಪುರ ಜಿಲ್ಲೆಯಲ್ಲಿ ರೈತರು ಕಬ್ಬು ಬೆಳೆದಿರುವ ಕ್ಷೇತ್ರ ಎಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು),

ಇ) ರೈತರು ಬೆಳೆದ ಕಬ್ಬನ್ನು ಕೆಲವು ಕಾರ್ಖಾನೆಗಳು ಖರೀದಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಈ) ಅಂತಹ ಕಾರ್ಖಾನೆಯ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವಂತಹ ಅಧಿಕಾರವನ್ನು ಹೊಂದಿದೆಯೇ,

ಉ) ಹಾಗಾದರೆ ಸರ್ಕಾರ ಕಬ್ಬು ಖರೀದಿಸದೇ ಇರುವ ಕಾರ್ಖಾನೆ ಮೇಲೆ ಯಾವ ಕ್ರಮ ತೆಗೆದುಕೊಂಡಿದೆ ಮತ್ತು ಯಾವ ಕ್ರಮ ತೆಗೆದುಕೊಳ್ಳುವುದು,